ಜನಮಾಧ್ಯಮ

# ಸ್ವಯಂ ಪ್ರೇರಿತ ರಕ್ತದಾನ ಶಿಬಿರ

»ಜನಮಾಧ್ಯಮ, ಹಳಿಯಾಳ: ರಕ್ತದಾನವು ಶ್ರೇಷ್ಠ ದಾನವಾಗಿದ್ದು, ಆರೋಗ್ಯವಂತರೆಲ್ಲರೂ ರಕ್ತದಾನದ ಮೂಲಕ ಹಲವಾರು ಜೀವಗಳನ್ನು ಉಳಿಸಬಹುದಾಗಿದೆ ಎಂದು ಡಾ. ಉಮೇಶ್ ಹಳ್ಳಿಕೇರಿ ಹೇಳಿದರು.

ಪಟ್ಟಣದ ಕೆಎಲ್‌ಎಸ್ ವಿಡಿಐಟಿ ಮಹಾವಿದ್ಯಾಲಯದಲ್ಲಿ ಸೆಪ್ಟೆಂಬರ್ 18ರಂದು ರಕ್ತದಾನ ಶಿಬಿರವನ್ನು ಆಯೋಜಿಸಲಾಗಿತ್ತು.

ವ್ಯಸನಗಳಿಗೆ ಬಲಿಯಾಗದೆ ಒಳ್ಳೆಯ ಜೀವನ ಶೈಲಿಯು ದೇಹದಲ್ಲಿ ಆರೋಗ್ಯಯುತ ರಕ್ತವನ್ನು ಹೊಂದಲು ಸಹಕಾರಿಯಾಗುವುದೆಂದು ಡಾ. ಉಮೇಶ್ ಹಳ್ಳಿಕೇರಿ ಹೇಳಿದರು.

ಸಾಮಾಜಿಕ ಕಳಕಳಿಯಿಂದ ಮಹಾವಿದ್ಯಾಲಯವು ವರ್ಷಕ್ಕೆ ಎರಡು ಬಾರಿ ರಕ್ತದಾನ ಶಿಬಿರವನ್ನು ಹಮ್ಮಿಕೊಳ್ಳುತ್ತಿದೆ ಎಂದು ಪ್ರಾಚಾರ್ಯ ಡಾ. ವಿ ಎ ಕುಲಕರ್ಣಿ ಹೇಳಿದರು.

ಈ ಕಾರ್ಯಕ್ರಮವನ್ನು ಆಡಳಿತ ವಿಭಾಗದ ಡೀನ್ ಪ್ರೊ. ಮಂಜುನಾಥ ಡಿ. ಎನ್‌ಎಸ್‌ಎಸ್ ಸಂಚಾಲಕರಾದ ಪ್ರೊ. ಸಂತೋಷ್ ಸವಣೂರ್ ಸಂಯೋಜಿಸಿದ್ದರು. ಇಂಜಿನಿಯರ್ಸ್ ಡೇ ಅಂಗವಾಗಿ ಮಹಾವಿದ್ಯಾಲಯದ ಎನ್ ಎಸ್ ಎಸ್ ಘಟಕ ಮತ್ತು ಹುಬ್ಬಳ್ಳಿಯ ನವನಗರದ ಡಾ.ಆರ್. ಬಿ. ಪಾಟೀಲ್ ಕ್ಯಾನ್ಸರ್ ಆಸ್ಪತ್ರೆಯ ಸಹಯೋಗದಲ್ಲಿ ಹಮ್ಮಿಕೊಂಡಿದ್ದ ಈ ರಕ್ತದಾನ ಶಿಬಿರದಲ್ಲಿ 40ಕ್ಕೂ ಅಧಿಕ ವಿದ್ಯಾರ್ಥಿಗಳು ಮತ್ತು ಬೋಧಕ ಬೋಧಕೇತರ ಸಿಬ್ಬಂದಿಗಳು ರಕ್ತದಾನ ಮಾಡಿದರು.

Main Edition
Sep 21, 2024 Page No. 5
Powered by: erelego.com